Akashvani : Bangalore
Regional Bulletin In Kannada
29.10.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ೫೦ ಹಾಸಿಗೆಗಳ ತೀವ್ರ ಘಟಕ ನಿರ್ಮಾಣ ; ವರ್ಚುವಲ್ ಮೂಲಕ ಪ್ರಧಾನಿ ಶಂಕುಸ್ಥಾಪನೆ
- ರಾಜ್ಯದ ಮೂರು ಕಡೆ ರೋಜ್‌ಗಾರ್ ಮೇಳ ; ಕೌಶಲ್ಯಾಧಾರಿತ ಉದ್ಯೋಗ ಸೃಷ್ಟಿಗೆ ಕೇಂದ್ರ ಸರ್ಕಾರ ಪ್ರಾಶಸ್ತ್ಯ- ಕುಮಾರಸ್ವಾಮಿ
- ರಾಜ್ಯದ ೨೨೧ ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿ ಪ್ರಕಟ
- ರಾಜ್ಯದ ೨೯ ಜಿಲ್ಲೆಗಳಲ್ಲಿ ಲಿಂಗತ್ವ ಅಲ್ಪ ಸಂಖ್ಯಾತರ ಸರ್ವೆ

<><*<><>*><>

ಧನ್ವಂತರಿ ಜಯಂತಿ ಅಂಗವಾಗಿ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅವರು, ದೇಶಾದ್ಯಂತ ಸುಮಾರು ೧೨ ಸಾವಿರದ ೮೫೦ ಕೋಟಿ ರೂಪಾಯಿ ಮೊತ್ತದ ವಿವಿಧ ಆರೋಗ್ಯ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆಯನ್ನು ವರ್ಚುಯಲ್ ಮೂಲಕ ನೆರವೇರಿಸಿದರು. ಬಳಿಕ, ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ಯೋಜನೆ ವಿಸ್ತರಣೆಗೂ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಬೆಂಗಳೂರಿನ ಆನೇಕಲ್ ತಾಲೂಕಿನ ಇಗ್ಗಲೂರು ಗ್ರಾಮದಲ್ಲಿ ೨೦೦ ಹಾಸಿಗೆಗಳ ಇಎಸ್‌ಐ ಆಸ್ಪತ್ರೆ ಹಾಗೂ ರಾಯಚೂರಿನ ರಿಮ್ಸ್ ಆಸ್ಪತ್ರೆಯ ೫೦ ಹಾಸಿಗೆಗಳ ತೀವ್ರ ಘಟಕ ನಿರ್ಮಾಣಕ್ಕೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೇರವೇರಿಸಿದರು. ಮುಂದಿನ ದಿನಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ರಿಮ್ಸ್ ಅತ್ಯುತ್ತಮ ಆಸ್ಪತ್ರೆಯಾಗಿ ಕಾರ್ಯನಿರ್ವಹಿಸಲಿದೆ ಎಂದು ರಾಯಚೂರು ಶಾಸಕ ಡಾ. ಶಿವರಾಜ ಎಸ್. ಪಾಟೀಲ್ ಹೇಳಿದ್ದಾರೆ.

<><*<><>*><>

ದೇಶಾದ್ಯಂತ ಇಂದು ನಡೆದ ರೋಜ್‌ಗಾರ್ ಮೇಳವನ್ನು ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಉದ್ಘಾಟಿಸಿದರು. ದೇಶದ ಸುಮಾರು ೪೦ ಕಡೆಗಳಲ್ಲಿ ಸುಮಾರು ೫೧ ಸಾವಿರಕ್ಕೂ ೨೩೬ ಮಂದಿ ಪ್ರಶಿಕ್ಷಣಾರ್ಥಿಗಳಿಗೆ ಉದ್ಯೋಗ ಪತ್ರ ನೀಡಲಾಯಿತು. ಅಂಚೆ ಇಲಾಖೆ ಸಹಭಾಗಿತ್ವದಲ್ಲಿ ಬೆಂಗಳೂರಿನಲ್ಲಿ ಇಂದು ನಡೆದ ರೋಜ್‌ಗಾರ್ ಮೇಳ ಉದ್ಘಾಟಿಸಿದ ಕೇಂದ್ರ

ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ, ೧೬೦ ಪ್ರಶಿಕ್ಷಣಾರ್ಥಿಗಳಿಗೆ ಮಂದಿಗೆ ನೇಮಕಾತಿ ಪತ್ರ ವಿತರಿಸಿದರು. ಈ ವೇಳೆ ಕೌಶಲ್ಯಾಧರಿತ ಉದ್ಯೋಗ ಸೃಷ್ಟಿಗೆ ಕೇಂದ್ರ ಸರ್ಕಾರ ಹೆಚ್ಚು ಒತ್ತು ನೀಡುತ್ತಿದ್ದು, ಕಳೆದ ಬಜೆಟ್‌ನಲ್ಲಿ ಯುವಜನರಲ್ಲಿ ಕುಶಲತೆ ವೃದ್ಧಿಸುವ ನಿಟ್ಟಿನಲ್ಲಿ ೩ ಲಕ್ಷ ಕೋಟಿ ರೂಪಾಯಿಗೂ ಹೆಚ್ಚು ಹಣ ಮೀಸಲಿಡಲಾಗಿದೆ ಎಂದು ತಿಳಿಸಿದರು. ಮೈಸೂರಿನ ವಾಕ್ ಮತ್ತು ಶ್ರವಣ ಸಂಸ್ಥೆಯ ವಿಜ್ಞಾನ ಭವನದಲ್ಲಿ ಆಯೋಜಿಸಿದ ಉದ್ಯೋಗ ಮೇಳದಲ್ಲಿ ಆಯ್ಕೆಯಾದ ಮೈಸೂರು ವಿಭಾಗದ ೧೭೧ ಅಭ್ಯರ್ಥಿಗಳಿಗೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ನೇಮಕಾತಿ ಪತ್ರ ವಿತರಿಸಿದರು. ಬಳಿಕ ಮಾತನಾಡಿದ ಅವರು, ಭಾರತೀಯ ರೈಲ್ವೆ ಇಲಾಖೆಯಲ್ಲಿ ಈ ವರ್ಷ ೬೦ ಸಾವಿರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಈ ಬಾರಿ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

<><*<><>*><>

ಧಾರವಾಡದಲ್ಲಿ ಆಯೋಜಿಸಿದ್ದ ರೋಜಗಾರ್ ಮೇಳಕ್ಕೆ ಚಾಲನೆ ನೀಡಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಉದ್ಯೋಗ ಪಡೆದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿದರು. ಬಳಿಕ ಮಾತನಾಡಿದ ಅವರು, ಭಾರತದಲ್ಲಿ ಖಾಸಗಿ ವಲಯದ ಕೈಗಾರಿಕೆ ಬೆಳೆಯುತ್ತಿದ್ದು, ಉತ್ತಮ ಅವಕಾಶಗಳಿವೆ. ಜಗತ್ತಿಗೆ ನಮ್ಮ ಭಾರತದ ಸೇವೆ ಮತ್ತು ಉತ್ಪನ್ನಗಳು ಅವಶ್ಯವಿದೆ ಎಂದರು. ಸುಮಾರು ೫೧ ಸಾವಿರ ನೇಮಕಾತಿ ಪತ್ರ ವಿತರಿಸಲಾಗುತ್ತಿದೆ. ೨೦೪೭ರ ವಿಕಸಿತ ಭಾರತ ಸಂದರ್ಭದಲ್ಲಿ ಅವರ ಸೇವೆ ಭಾರತಕ್ಕೆ ಒಳಿತಾಗಲಿ ಎಂದು ಶುಭ ಹಾರೈಸಿದರು.

ಧ್ವನಿ : ಪ್ರಲ್ಹಾದ್ ಜೋಶಿ

<><*<><>*><>

ರಾಜ್ಯದ ೨೨೧ ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಪ್ರಕಟಿಸಿದೆ. ಉಪಚುನಾವಣೆ ನಡೆಯಲಿರುವ ಶಿಗ್ಗಾಂವಿ, ಸಂಡೂರು, ಚನ್ನಪಟ್ಟಣ ಕ್ಷೇತ್ರಗಳಲ್ಲಿ ಹೊರತುಪಡಿಸಿ ಉಳಿದೆಲ್ಲ ಕ್ಷೇತ್ರಗಳಲ್ಲಿ ಪಟ್ಟಿ ಪ್ರಕಟಿಸಲಾಗಿದ್ದು, ಇಂದಿನಿಂದ ನವೆಂಬರ್ ೨೮ ರವರೆಗೂ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ. ಮುಂದಿನ ವರ್ಷದ ಜನವರಿ ೬ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆಯಾಗಲಿದೆ ಎಂದು ಆಯೋಗ ಹೇಳಿಕೆಯಲ್ಲಿ ತಿಳಿಸಿದೆ. ಮತದಾರರ ಸಂಕ್ಷಿಪ್ತ ಪರಿಷ್ಕರಣೆ ಪ್ರಗತಿಯಲ್ಲಿದ್ದು, ರಾಜಕೀಯ ಪಕ್ಷಗಳು ಮತ್ತು ಸಾರ್ವಜನಿಕರ ನೆರವನ್ನು ಕೋರಲಾಗಿದೆ. ಸರ್ಕಾರಿ ಕಚೇರಿ ಮತ್ತು ಜಾಲತಾಣ www.ceokarnataka.kar.nic.in ನಲ್ಲಿ ಮತದಾರರ ಪಟ್ಟಿ ಪ್ರಕಟಗೊಂಡಿದ್ದು, ಪಟ್ಟಿಯಲ್ಲಿ ಹೆಸರು

ಇಲ್ಲದವರು ಸಹಾಯವಾಣಿ ಮೂಲಕ ಅರ್ಜಿ ಸಲ್ಲಿಸಬಹುದು. ಯಾವುದೇ ಸಂದೇಹಗಳಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಜಿಲ್ಲಾ ಸಂಪರ್ಕ ಕೇಂದ್ರದ ಸಹಾಯವಾಣಿ ಸಂಖ್ಯೆ-ಟೋಲ್ ಫ್ರೀ ಸಂಖ್ಯೆ ೧-೯-೫-೦ಕ್ಕೆ ಕರೆ ಮಾಡಬಹುದಾಗಿದೆ ಎಂದು ಆಯೋಗ ತಿಳಿಸಿದೆ.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಸಾರ್ವಜನಿಕರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಇಂದಿನಿಂದ ನವೆಂಬರ್ ೨೮ರವರೆಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಪಟ್ಟಿ ಪ್ರಕಟಿಸಿದ ಜಿಲ್ಲಾಧಿಕಾರಿ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಆರಂಭವಾಗಿದ್ದು, ಜಿಲ್ಲೆಯಲ್ಲಿ ವಿಶೇಷ ನೋಂದಣಿ ಕಾರ್ಯಾಚರಣೆ ಮೂಲಕ ಅರ್ಹರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗುವುದು ಎಂದರು. ರಾಜಕೀಯ ಪಕ್ಷಗಳು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ವ್ಯಾಪಕ ಪ್ರಚಾರ ನೀಡಬೇಕು, ಪ್ರತಿಯೊಂದು ಮತಗಟ್ಟೆಗೂ ಏಜೆಂಟರನ್ನು ನೇಮಕ ಮಾಡಬೇಕು ಎಂದು ಸೂಚಿಸಿದ ಜಿಲ್ಲಾಧಿಕಾರಿ, ೨೦೨೫ರ ಜನವರಿ ೦೬ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

<><*<><>*><>

ರಾಜ್ಯ ಲಿಂಗತ್ವ ಅಲ್ಪ ಸಂಖ್ಯಾತರ ನೀತಿ ೨೦೧೨ಕ್ಕೆ ಪೂರಕವಾಗಿ ರಾಜ್ಯಾದ್ಯಂತ ಮೊದಲ ಹಂತದ ಸಮೀಕ್ಷೆಯನ್ನು ೭೦ ಲಕ್ಷ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ಲಿಂಗತ್ವ ಅಲ್ಪ ಸಂಖ್ಯಾತರ ರಾಜ್ಯಮಟ್ಟದ ಸಮನ್ವಯ ಸಮಿತಿ ಅಧ್ಯಕ್ಷರಾದ ಉಮಾಮಹದೇವನ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ೨೯ ಜಿಲ್ಲೆಗಳ ಲಿಂಗತ್ವ ಅಲ್ಪ ಸಂಖ್ಯಾತರ ಮೂಲ ಕುರಿತ ಸರ್ವೇ ಕೈಗೊಳ್ಳಲು ನಡೆದ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಲಿಂಗತ್ವ ಅಲ್ಪ ಸಂಖ್ಯಾತರನ್ನು ಮುಖ್ಯವಾಹಿನಿಗೆ ತರುವ ಸಲುವಾಗಿ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಇವರಿಗೆ ಉದ್ಯೋಗ ಶಿಕ್ಷಣ ಮೀಸಲಾತಿ ಒದಗಿಸಿ ಸಾಮಾಜಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿಪಡಿಸಬೇಕು ಎಂದರು. ಮೈಸೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪ್ರಾಯೋಗಿಕ ಪರೀಕ್ಷೆ ನಡೆಸಲಾಗಿತ್ತು. ಈ ಬಾರಿ ಎಲ್ಲ ಜಿಲ್ಲೆಗಳಲ್ಲೂ ಸಮೀಕ್ಷೆ ಕೈಗೊಳ್ಳಲು ಕ್ರಮವಹಿಸಲಾಗಿದೆ ಎಂದು ಅವರು ತಿಳಿಸಿದರು.

<><*<><>*><>

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ನವೆಂಬರ್ ೦೧ರಂದು ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ “೨೦೨೪-೨೫ನೇ ಸಾಲಿನ ರಾಜ್ಯ ಮಟ್ಟದ ೬೯ನೇ

ಕರ್ನಾಟಕ ರಾಜ್ಯೋತ್ಸವ" ಸಮಾರಂಭ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾರಂಭದ ಧ್ವಜಾರೋಹಣ ನೆರವೇರಿಸಿ, ನಾಡಿನ ಜನತೆಗೆ ರಾಜ್ಯೋತ್ಸವ ಸಂದೇಶ ನೀಡಲಿದ್ದಾರೆ. ಸಮಾರಂಭದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ. ವಿವಿಧ ಶಾಲೆಗಳಿಂದ ಸುಮಾರು ೧೪ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಶಾಲೆಯ ಶಿಕ್ಷಕರ ಸಮ್ಮುಖದೊಂದಿಗೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ರೈತರ ಹಿತಾಸಕ್ತಿ ರಕ್ಷಣೆಗೆ ರಾಜ್ಯಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ಇದೀಗ ಪ್ರತಿ ಜಿಲ್ಲೆಗಳಲ್ಲಿ ರೈತರಿಗೆ ತರಬೇತಿ ಕೇಂದ್ರ ಸ್ಥಾಪಿಸಲು ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ಹಾಸನದಲ್ಲಿ ಇಂದು ಹಾಸನಾಂಬೆ ದರ್ಶನ ಪಡೆದು ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವರ್ಷದಿಂದ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ತರಬೇತಿ ಕೇಂದ್ರ ತೆರೆದು, ಮಣ್ಣು ಪರೀಕ್ಷೆ ಹೆಚ್ಚಿಸಲು ಯೋಜಿಸಲಾಗಿದೆ. ಮುಂದಿನ ವರ್ಷದಿಂದ ಎರಡು ಲಕ್ಷ ರೈತರಿಗೆ ತರಬೇತಿ, ಐದು ಲಕ್ಷ ಮಣ್ಣು ಮಾದರಿ ಪರೀಕ್ಷೆಗೆ ಒಳಪಡಿಸುವ ಗುರಿ ಹೊಂದಲಾಗಿದೆ ಎಂದರು. ರಾಜ್ಯ ಕೃಷಿ ಅಭಿವೃದ್ಧಿ ಸಂಸ್ಥೆಯ ಮೂಲಕ ಆಧುನಿಕ ಕೃಷಿ ಹಾಗೂ ಪರಿಕರಗಳ ಬಳಕೆ ಬಗ್ಗೆ ರೈತರಿಗೆ ಮಾಹಿತಿ ನೀಡಲು ಯೋಜಿಸಲಾಗಿದೆ. ಕೃಷಿ ಕ್ಷೇತ್ರದಲ್ಲಿ ರೈತರ ಅನುಕೂಲಕ್ಕಾಗಿ ಇನ್ನು ಹತ್ತು ಹಲವು ಹೊಸ ಯೋಜನೆಗಳನ್ನು ಜಾರಿಗೆ ತರಲು ಮುಂದಾಗಿರುವುದಾಗಿ ಹೇಳಿದರು.

<><*<><>*><>

ರಾಜ್ಯದ ವಿವಿಧೆಡೆ ಇಂದು ಜಿಲ್ಲಾಡಳಿತದಿಂದ ಧನ್ವಂತರಿ ಜಯಂತಿ ಆಚರಿಸಲಾಯಿತು. ಇದರ ಅಂಗವಾಗಿ ಆಯುರ್ವೇದ ಚಿಕಿತ್ಸೆ ಕುರಿತು ಜನರಲ್ಲಿ ಅರಿವು ಮೂಡಿಸಲಾಯಿತು. ಧಾರವಾಡದಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಗುತ್ತಲ ಆಯುರ್ವೇದ ವಿದ್ಯಾಲಯದ ಪ್ರಾಚಾರ್ಯ ಡಾ. ಎಸ್.ಟಿ.ಹೊಂಬಾಳೆ, ಆಯುರ್ವೇದ ಚಿಕಿತ್ಸಾ ವ್ಯವಸ್ಥೆಯಿಂದ ದೇಹ, ಮನಸ್ಸು ಮತ್ತು ಆತ್ಮದ ನಡುವೆ ಸಮತೋಲನ ಕಾಯ್ದುಕೊಳ್ಳುವ ಮೂಲಕ ರೋಗಗಳನ್ನು ತಡೆಗಟ್ಟಬಹುದು ಎಂದರು.

ಧ್ವನಿ : ಎಸ್.ಟಿ. ಹೊಂಬಾಳೆ

ವಿಜಯನಗರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಹೊಸಪೇಟೆ ತಾಲೂಕಿನ ಸರ್ಕಾರಿ ಆಯುರ್ವೇದ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಮುನಿವಾಸು ದೇವರೆಡ್ಡಿ, ಭಾರತೀಯ ಮೂಲದ ಆಯುರ್ವೇದ ಪದ್ಧತಿ ಇಂದು ಆರೋಗ್ಯ ರಕ್ಷಣೆಯಲ್ಲಿ ವಿಶ್ವದಲ್ಲಿಯೇ ಹೆಸರುವಾಸಿಯಾಗಿದೆ ಎಂದು ಹೇಳಿದರು.

<><*<><>*><>

ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜನ್ಮದಿನದ ಅಂಗವಾಗಿ ಯಾದಗಿರಿ ನಗರದ ನೇತಾಜಿ ಸುಭಾಷ್ ಚಂದ್ರಬೋಸ್ ವೃತ್ತದಿಂದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದವರೆಗೆ ಐಕ್ಯತಾ ನಡಿಗೆಯನ್ನು ಆಯೋಜಿಲಾಗಿತ್ತು. ಬಿಜೆಪಿ ಪಕ್ಷದ ಜಿಲ್ಲಾಧ್ಯಕ್ಷ ಅಮೀನ್ ರೆಡ್ಡಿ ಸೇರಿದಂತೆ ಹಲವು ಕಾರ್ಯಕರ್ತರು ಐಕ್ಯತಾ ನಡೆಗೆಯಲ್ಲಿ ಪಾಲ್ಗೊಂಡರು. ಪ್ರಧಾನಿ ನರೇಂದ್ರ ಮೋದಿ ಅವರು ಮನ್ ಕಿ ಬಾತ್ ನಲ್ಲಿ ರನ್ ಫಾರ್ ಯೂನಿಟಿ ಎಂಬ ಕರೆಯನ್ನು ನೀಡಿದ್ದರು. ದೇಶದ ಐಕ್ಯತೆ ಮತ್ತು ಸಮಗ್ರತೆಗಾಗಿ ಸರ್ದಾರ್ ವಲ್ಲಭಬಾಯಿ ಅವರ ಕೊಡುಗೆ ಅಪಾರವಾಗಿದೆ. ಈ ನಿಟ್ಟಿನಲ್ಲಿ ಅವರ ಜನ್ಮದಿನದಂದು ರಾಷ್ಟ್ರೀಯ ಏಕತಾ ನಡಿಗೆ ಮಾಡಲಾಗುತ್ತಿದೆ ಎಂದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಿಮ್ಹಾನ್ಸ್ ಸಹಯೋಗದಲ್ಲಿ ವಿಶ್ವ ಪಾರ್ಶ್ವ ವಾಯು ದಿನಾಚರಣೆ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಬಿ.ಎನ್.ಶಾಂತಲಾ ಮದ್ಯಪಾನ, ಧೂಮಪಾನ ಹಾಗೂ ಒತ್ತಡದ ಜೀವನ ಶೈಲಿ ಪಾರ್ಶ್ವ ವಾಯು ಬರಲು ಕಾರಣವಾಗಿದ್ದು, ಈ ಬಗ್ಗೆ ಮುಂಜಾಗ್ರತೆ ವಹಿಸಿದರೆ ಪಾರ್ಶ್ವ ವಾಯು ಬರದಂತೆ ತಡೆಗಟ್ಟಬಹುದಾಗಿದೆ ಎಂದರು.

೨. ಮಡಿಕೇರಿಯ ಸರ್ಕಾರಿ ಜೂನಿಯರ್ ಕಾಲೇಜಿನಲ್ಲಿ ಜಿಲ್ಲಾಡಳಿತ ಸಹಯೋಗದಲ್ಲಿ ಇಂದು ನಮ್ಮ ನಡೆ ಹಸಿರೆಡೆಗೆ ಅಭಿಯಾನದಡಿ ಸ್ವಚ್ಛ ದೀಪಾವಳಿಯತ್ತ ನಮ್ಮ ಹೆಜ್ಜೆ ಎಂಬ ಪರಿಸರ ಜಾಗೃತಿ ಅಭಿಯಾನ ನಡೆಯಿತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>